ಹೊಸ ದಿಗಂತ
sangama2
10 Sep 2023

# ಲೂವಿಸ್ ಕಣ್ಣಪ್ಪ ಬದುಕು, ಬರಹ ಉಪನ್ಯಾಸ ಕಾರ್ಯಕ್ರಮ



**ಮಂಗಳೂರು:** ನವದೆಹಲಿಯ ಸಾಹಿತ್ಯ ಅಕಾಡೆಮಿ ವತಿಯಿಂದ ಕೊಂಕಣಿ ಸಾಹಿತಿಗಳು ಮತ್ತು ಕಲಾವಿದರ ಸಂಘಟನೆಯ ಆಶ್ರಯದಲ್ಲಿ ನಗರದ ಸಂತ ಅಲೋಶಿಯಸ್ ಕಾಲೇಜು ಸಭಾಂಗಣದಲ್ಲಿ 'ಥ್ರೂ ಮೈ ವಿಂಡೋ' ಸರಣಿ ಕಾರ್ಯಕ್ರಮದ ಭಾಗವಾಗಿ ಕೊಂಕಣಿಯ ಪ್ರಪ್ರಥಮ ಪತ್ರಿಕೆ 'ದಿರ್ವೆಂ' ಸರದಾರ ಲೂವಿಸ್ ಕಣ್ಣಪ್ಪ ಅವರ ಬದುಕು – ಬರಹದ ಕುರಿತು ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಮುಂಬೈಯ ಲೇಖಕಿ ಶ್ಯಾಮಲಾ ಮಾಧವ ಅವರು ಲೂವಿಸ್ ಕಣ್ಣಪ್ಪ ಅವರ ಬದುಕು – ಬರಹದ ಕುರಿತಂತೆ ವಿಶೇಷ ಉಪನ್ಯಾಸ ಕುರಿತು ವಿಶೇಷ ಉಪನ್ಯಾಸ ನೀಡಿದರು.

ನವದೆಹಲಿ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭಾಷಾ ಸಲಹಾ ಸಮಿತಿ ಸದಸ್ಯ ಎಚ್.ಎಂ. ಪೆರ್ನಾಲ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಂತ ಅಲೋಶಿಯಸ್ ಕಾಲೇಜಿನ ಕೊಂಕಣಿ ಸಂಸ್ಥೆಯ ಮುಖ್ಯಸ್ಥ ಡಾ. ಮೆಲ್ವಿನ್ ಪಿಂಟೊ, ವಿಶನ್ ಕೊಂಕಣಿ ಪ್ರವರ್ತಕ, ಅನಿವಾಸಿ ಉದ್ಯಮಿ ಮೈಕಲ್ ಡಿ'ಸೋಜಾ, ವಿನ್ಸೆಂಟ್ ಫಾಯ್ಸ್, ಎಂಸಿಸಿ ಬ್ಯಾಂಕ್ ಅಧ್ಯಕ್ಷ ಅನಿಲ್ ಲೋಬೊ, ಸ್ಟೀವನ್ ಪಿಂಟೊ, ಓಸ್ವಾಲ್ಡ್ ರೋಡ್ರಿಗಸ್, ಕೊಂಕಣಿ ಸಾಹಿತಿಗಳು ಮತ್ತು ಕಲಾವಿದರ ಸಂಘಟನೆಯ ಅಧ್ಯಕ್ಷ ಡೊನಾಲ್ಡ್ ಸಿಕ್ವೇರಾ, ಕಾರ್ಯದರ್ಶಿ, ಫ್ಲೋರಿನ್ ರೋಚ್, ಕೋಶಾಧಿಕಾರಿ ರೋಶನ್ ಮಾಡ್ತಾ, ಎನ್. ಜಿ. ಮೋಹನ್ ಸಾಥ್, ಮೆಲ್ವಿನ್ ರೊಡ್ರಿಗಸ್ ಮತ್ತಿತರರು ಉಪಸ್ಥಿತರಿದ್ದರು.